**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ**

**ಆಳಂದ**

ಸಿ.ಸಿ, ನಂಬರ 179/2020 ಸಿ.ಡಬ್ಲೂ.12 ಪಿ.ಡಬ್ಲೂ.10

| | |
|---|---|
| ಹೆಸರು | ರುಕ್ಮುದ್ದಿನ |
| ತಂದೆ/ಗಂಡ | ಅಬ್ದುಲಸಾಬ |
| ವಯಸ್ಸು | 67 ವರ್ಷ |
| ಉದ್ಯೋಗ | ನಿವೃತ್ತ ಎ ಎಸ್ ಐ ನರೋಣಾ |
| ವಾಸಸ್ಥಳ | ನರೋಣಾ |

ದಿನಾಂಕ 07-02-2026
ಸತ್ಯ ಪ್ರತಿಜ್ಞೆಯ ಮೇರೆಗೆ

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ವಕೀಲರಿಂದ:**

ನಾನು 2018 ರಿಂದ ದಿಃ 31-01-2020 ರವರೆಗೆ ನರೋಣಾ ಪೋಲಿಸ್ ಠಾಣೆಯಲ್ಲಿ ಎ ಎಸ್ ಐ ಅಂತಾ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 24-09-2019 ರಂದು ಚಾಸಾ 10 ರವರ ಕಡೆಯಿಂದ ಈ ಪ್ರಕರಣದಲ್ಲಿ ಕಡತವನ್ನು ಪಡೆದು ತನಿಖೆ ಕೈಗೊಂಡು ಗುನ್ಹಾ ಸ್ಥಳಕ್ಕೆ ಭೇಟಿ ಕೊಟ್ಟು ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ 4.00 ಗಂಟೆಯಿಂದ 5.00 ಗಂಟೆಯವರೆಗೆ ಚಾಸಾ 2 ಮತ್ತು 3 ರವರ ಸಮಕ್ಷಮ ಪಂಚನಾಮೆ ಜರುಗಿಸಿ ಸ್ಥಳದಿಂದ ಒಂದು ಕಟ್ಟಿಗೆಯನ್ನು ಜಪ್ತಿ ಪಡಿಸಿಕೊಂಡಿರುತ್ತೇನೆ. ಅದೇ ದಿನ ಚಾಸಾ 4 ರಿಂದ 8 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ 11 ರವರಿಗೆ ಸಲ್ಲಿಸಿರುತ್ತೇನೆ.

ಸಾಕ್ಷಿಯು ಗುನ್ಹಾ ಸ್ಥಳದ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 5, ಸಾಕ್ಷಿಯ ಸಹಿಯನ್ನು ನಿಪಿ. 5 ಎ ಅಂತಾ ಗುರುತಿಸಲಾಯಿತು. ಸಾಕ್ಷಿಯು ಈಗಾಗಲೇ ಗುರುತಿಸಲಾದ ಮು. ಮಾ. 1ನ್ನು ನೋಡಿದರೆ ಗುರುತಿಸುತ್ತೇನೆ ಅಂತಾ ನುಡಿಯುತ್ತಾರೆ. ಸಾಕ್ಷಿಯು ನ್ಯಾಯಾಲಯದಲ್ಲಿ ಇರುವ ಆರೋಪಿಯನ್ನು ನೋಡಿ ಗುರುತಿಸುತ್ತಾರೆ.

ಪಾಟೀ ಸವಾಲುಃ ಆರೋಪಿತರ ಪರ ಶ್ರೀ. ಬಿ.ಜಿ.ಬಿ ವಕೀಲರಿಂದ:

ಪಂಚರನ್ನು ನಾನೇ ಕರೆಸಿರುತ್ತೇನೆ. ಸದರಿ ಅವರ ಮೊಬೈಲ ಸಂಖ್ಯೆ ನನ್ನ ಬಳಿ ಇರುವುದಿಲ್ಲ. ಪಂಚರು ಊರಿನಲ್ಲಿ ಇದ್ದರು, ನಿಖರವಾಗಿ ಯಾವ ಸ್ಥಳದಲ್ಲಿ ಇದ್ದರು ಅಂತಾ ಹೇಳಲು ಬರುವುದಿಲ್ಲ. ಸದರಿ ಪಂಚರು ನಮ್ಮ ಠಾಣೆಯ ಖಾಯಂ ಪಂಚರು ಎಂದರೆ ನನಗೆ ಗೊತ್ತಿಲ್ಲ. ಚಾಸಾ 2 ಮತ್ತು 3 ರವರು ಅವರು ಪಂಚನಾಮೆಯನ್ನು ಅವರ

ಸಮಕ್ಷಮ ಮಾಡಿರುವುದಿಲ್ಲ ಅಂತಾ ಸಾಕ್ಷಿ ಹೇಳಿದ್ದಾರೆ ಎಂದರೆ ಅದು ಸುಳ್ಳು ಅಂತಾ ನುಡಿಯುತ್ತಾರೆ. ಚಾಸಾ 2 ಮತ್ತು 3 ರವರು ಪಂಚನಾಮೆಯ ಮೇಲೆ ಸಹಿ ಮಾಡಿಲ್ಲ ಎಂದರೆ ಸರಿಯಲ್ಲ. ಚಾಸಾ 7 ರವರು ನನ್ನ ಹೇಳಿಕೆಯನ್ನು ಪಡೆದಿಲ್ಲ ಅಂತಾ ಹೇಳಿದ್ದಾರೆ ಎಂದರೆ ನಾನು ಹೇಳಿಕೆಯನ್ನು ಪಡೆದುಕೊಂಡಿದ್ದೇನೆ ಅಂತಾ ನುಡಿಯುತ್ತಾರೆ. ನಾನು ಠಾಣೆಯಲ್ಲಿ ಕುಳಿತು ದಾಖಲೆಯನ್ನು ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗಳ ಹೇಳಿಕೆಗಳನ್ನು ಟೈಪ್ ಮಾಡಿಸಿರುತ್ತೇನೆ. ನಾನು ಠಾಣೆಯಲ್ಲಿ ಟೈಪ ಮಾಡಿಸಿಲ್ಲ ಎಂದರೆ ಸರಿಯಲ್ಲ. ನಾನು ಎಲ್ಲಾ ದಾಖಲೆಗಳನ್ನು ಠಾಣೆಯಲ್ಲಿ ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಹೇಳಿಕೆಗಳನ್ನು ದಾಖಲಿಸಿಕೊಳ್ಳದ ಕಾರಣ ನನ್ನ ಹೆಸರನ್ನು ಅಂತಿಮ ವರದಿಯಲ್ಲಿ ನಮೂದು ಮಾಡಿಲ್ಲ ಎಂದರೆ ಸರಿಯಲ್ಲ. ದಿಃ 24-09-2019 ರಂದು ಚಾಸಾ 10 ರವರ ಕಡೆಯಿಂದ ಈ ಪ್ರಕರಣದಲ್ಲಿ ಕಡತವನ್ನು ಪಡೆದು ತನಿಖೆ ಕೈಗೊಂಡು ಗುನ್ನಾ ಸ್ಥಳಕ್ಕೆ ಭೇಟಿ ಕೊಟ್ಟು ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ 4.00 ಗಂಟೆಯಿಂದ 5.00 ಗಂಟೆಯವರೆಗೆ ಚಾಸಾ 2 ಮತ್ತು 3 ರವರ ಸಮಕ್ಷಮ ಪಂಚನಾಮೆ ಜರುಗಿಸಿ ಸ್ಥಳದಿಂದ ಒಂದು ಕಟ್ಟಿಗೆಯನ್ನು ಜಪ್ತಿ ಪಡಿಸಿಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ದಿನ ಚಾಸಾ 4 ರಿಂದ 8 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ದಿನ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ 11 ರವರಿಗೆ ಸಲ್ಲಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರುವಿಚಾರಣೆ ಇರುವುದಿಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಸಾ.ಓ.ಹೇ.ಕೇ.ಸ.ಇ.ಅದೆ.

ಸಿ.ಸಿ. ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ.ಎಫ್.ಸಿ ಆಳಂದ